ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕಾಮಗಾರಿಗೆ ಸಂಬಂಧಿಸಿದಂತೆ ವಿವರ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

315 (400) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿ ಗ್ರಾಮ ವಿಕಾಸ್ ಯೋಜನೆಯಲ್ಲಿ ತುಮಕೂರು ಜಿಲ್ಲೆ, ಚಿಕ್ಕನಾಯಕಹಳ್ಳಿ ತಾಲ್ಲೂಕು, ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾಲಕಟ್ಟೆ ಗ್ರಾಮಕ್ಕೆ ಯಾವ ವಿಧಾನ ಪರಿಷತ್ ಸದಸ್ಯರ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಆ) ಸದರಿ ಯೋಜನೆಗೆ ಯಾವ ವರ್ಷ ಹಣ ಬಿಡುಗಡೆ ಮಾಡಲಾಗಿದೆ ಮತ್ತು ಸದರಿ ಕಾಮಗಾರಿ ಅಪೂರ್ಣವಾಗಿದ್ದಲ್ಲಿ ಕಾರಣಗಳೇನು;

(ಇ) ಸದರಿ ಯೋಜನೆಯನ್ವಯ ಅನುಮೋದನೆಗೊಂಡ ಕಾಮಗಾರಿಯನ್ನು ಬದಲಾಯಿಸಲಾಗಿದೆಯೇ ;

(ಈ) ಬದಲಾಯಿಸಿದ್ದಲ್ಲಿ, ರಾಜ್ಯ ಸರ್ಕಾರದ ನಡವಳಿ ಸಂಖ್ಯೆ : ಗ್ರಾಅಪ/09/ ಗ್ರಾವಿಯೋ/2017, ದಿನಾಂಕ : 20-06-2017ರನ್ವಯ ಸಂಬಂಧಪಟ್ಟ ವಿಧಾನ ಪರಿಷತ್ ಸದಸ್ಯರ ಒಪ್ಪಿಗೆ ಪಡೆಯಲಾಗಿದೆಯೇ ;

(ಉ) ಸದರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ನಿಯಮಾವಳಿಗೆ ವಿರುದ್ಧವಾಗಿ ಕಾಮಗಾರಿ ಬದಲಾಯಿಸಿರುತ್ತಾರೆಯೇ ;

(ಊ) ಹಾಗಿದ್ದಲ್ಲಿ, ಅವರ ಮೇಲೆ ನಿಯಮಾನುಸಾರ ಯಾವ ಕ್ರಮ ಕೈಗೊಳ್ಳಲಾಗಿದೆ ?